ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಮಂಗಳವಾರ, ದಿನಾಂಕ : 08 ನೇ ಡಿಸೆಂಬರ್, 2020

ಮೈಸೂರು ನಗರದ ರಿಂಗ್ ರಸ್ತೆಯ ಎರಡೂ ಬದಿಯಲ್ಲಿ

ತ್ಯಾಜ್ಯದ ರಾಶಿ ಕುರಿತು

ಶ್ರೀ ಎಸ್.ನಾಗರಾಜ(ಸಂದೇಶ್‌ನಾಗರಾಜ್)(ಸ್ಥಳೀಯಸಂಸ್ಥೆಗಳಿಂದ ಚುನಾಯಿತರಾದವರು):-

157 (191) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮೈಸೂರ ು ನಗರ ರಿಂಗ್ ರಸ್ತೆಯ ಎರಡೂ ಬದಿಯಲ್ಲಿ ಅಲ್ಲಲ್ಲಿ ತ್ಯಾಜ್ಯದ ರಾಶಿ ಬಿದ್ದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದರಿಂದ ನಗರದ ಸಾರ್ವಜನಿಕರ ಆರೋಗ್ಯಕ್ಕೆ, ಸೌಂದರ್ಯಕ್ಕೆ ಹಾನಿ ಉಂಟಾಗಿ, ಪರಿಸರದ ಮೇಲೆ ವ್ಯತಿರಿಕ್ತ ಪರಿಣಾಮ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಕೂಡಲೇ ಈ ತ್ಯಾಜ್ಯದ ರಾಶಿಯನ್ನು ತೆಗೆದು ಸ್ವಚ್ಛಗೊಳಿಸಿ ಪರಿಸರ ನೈರ್ಮಲ್ಯಕ್ಕೆ, ನಗರದ ಅಂದಕ್ಕೆ ಗಮನ ಕೊಡಲಾಗುವುದೇ; ಸಿ.ಸಿ. ಕ್ಯಾಮರಾಗಳನ್ನು ಅಳವಡಿಸಿ ತ್ಯಾಜ್ಯವನ್ನು ಸುರಿಯುವವರನ್ನು ಪತ್ತೆ ಹಚ್ಚಿ, ಅವರಿಗೆ ದಂಡ ವಿಧಿಸಲು ಕ್ರಮ ತೆಗೆದುಕೊಳ್ಳಲಾಗುವುದೇ?